# ಉಪತಹಶೀಲ್ದಾರವರ ನ್ಯಾಯಾಲಯ, ಕೋಗಳಿ, ಹ.ಬೊ.ಹಳ್ಳಿ ತಾಲೂಕು.

ಸಂ/ಕಂ/ಪಹಣಿ/ವಿವಾದ/67/2015-16 ದಿನಾಂಕ:19.05.2016

ಉಪಸ್ಥಿತರು:-ವಿ.ಹೆಚ್.ಮಲ್ಲಿಕಾರ್ಜುನ,
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

| ಅರ್ಜಿದಾರರು | ತಕರಾರುದಾರರು |
|---|---|
| ಶ್ರೀಮತಿ ಕೆ.ವೀರಮ್ಮ ಗಂಡ ಗೋಣೆಪ್ಪ<br>ಗ್ರಾಮ:-ಬೆಣಕಲ್ಲು ತಾ:-ಹ.ಬೊ.ಹಳ್ಳಿ | ಶ್ರೀ ಷಣ್ಮುಖಪ್ಪ ತಂದೆ ಕೆಂಪ್ಪಣ್ಣ<br>ಗ್ರಾಮ:-ಬೆಣಕಲ್ಲು ತಾ:-ಹ.ಬೊ.ಹಳ್ಳಿ |

**ವಿವಾದಿತಜಮೀನಿನ ವಿವರ:**

| ಕ್ರ.ಸಂ. | ತಾಲೂಕು | ಗ್ರಾಮದ ಹೆಸರು | ಸ.ನಂ. | ವಿಸ್ತೀರ್ಣ(ಎಕರೆಗಳಲ್ಲಿ) | ತರಹೆ |
|---|---|---|---|---|---|
| 1. | ಹಗರಿಬೊಮ್ಮನಹಳ್ಳಿ | ಬೆಣಕಲ್ಲು | 330/ಬಿ | 0-50 | ಖುಷ್ಕಿ |

**ಪೀಠಿಕೆ:-**

ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಬೆಣಕಲ್ಲು ಗ್ರಾಮದ ವಿವಾದಿತ ಜಮೀನಿಗೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಬೆಣಕಲ್ಲು ಗ್ರಾಮದ ನಿವಾಸಿಯಾದ ಕೆ.ವೀರಮ್ಮ ಗಂಡ ಗೋಣೆಪ್ಪ ಇವರ ನೋಂದಾಯಿತ ಕ್ರಯದ ಸ್ತಾವೇಜು ಸಂಖ್ಯೆ ಹೆಚ್.ಬಿ.ಹೆಚ್-1-01828-2015-2016 ದಿನಾಂಕ:17.08.2015 ರಂದು ಮೊತ್ತ ರೂ:29,000/-ಕ್ಕೆ ಖರೀದಿಸಿರುತ್ತಾರೆ. ಗ್ರಾಮದಲ್ಲಿ ನಮೂನೆ-21ರ ನೋಟೀಸನ್ನು ದಿನಾಂಕ:25.08.2015 ರಂದು ಜಾರಿಮಾಡಲಾಗಿ, ನಿಗದಿತ ಅವಧಿಯೊಳಗೆ ಅಂದರೆ ದಿನಾಂಕ:02.09.2015 ರಂದು ಷಣ್ಮುಖಪ್ಪ ತಂದೆ ಕೆಂಪ್ಪಣ್ಣ ಇವರು ತಕರಾರು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಕಾರಣ, ಎಂ.ಆರ್.ನಂ.15/15-16ರ ಕಡತವು ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಕೋಗಳಿ ಇವರು ಈ ಕಾರ್ಯಾಲಯಕ್ಕೆ ವರದಿ ಸಲ್ಲಿಸಿರುತ್ತಾರೆ. ಉಭಯ ಪಕ್ಷಕಾರರಿಗೆ ದಿ:04.12.2015ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಲಾಯಿತು.

ಪ್ರಕರಣವನ್ನು ದಿನಾಂಕ:04.12.2016 ರಿಂದ 19.05.2015ರ ವರೆಗೆ ವಿಚಾರಣೆಯನ್ನು ಮಾಡಲಾಯಿತು. ಉಭಯರು ಹಾಜರಾಗಿರುತ್ತಾರೆ. ಅರ್ಜಿದಾರರು ಹಾಜರಾಗಿ ಹೇಳುವಂತೆ; ಸದರಿ ಜಮೀನು ಕ್ರಯ ಪ್ರಕಾರ ನನ್ನ ಹೆಸರಿಗೆ ಹಕ್ಕುಬದಲಾವಣೆ ಮಾಡಲು ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ.

ತಕರಾರುದಾರರು ಹಾಜರಾಗಿ ಹೇಳುವಂತೆ; ಸದರಿ ಜಮೀನಿಗೂ ನಮಗೂ ಯಾವುದೇ ಸಂಬಂಧ ಇರುವುದಿಲ್ಲ. ಎಂದು ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ.

ಸದರಿ ಪ್ರಕರಣದಲ್ಲಿ ಅರ್ಜಿದಾರರು ಮತ್ತು ತಕರಾರುದಾರರು ನೀಡಿದ ಹೇಳಿಕೆ ಮತ್ತು ದಾಖಲೆಗಳನ್ನು ಪರಿಶೀಲನೆಮಾಡಲಾಗಿ, ಅರ್ಜಿದಾರರ ಹೆಸರಿಗೆ ನೋಂದಾಯಿತ ಕ್ರಯ ದಸ್ತಾವೇಜು ಸಂಖ್ಯೆ ಹೆಚ್.ಬಿ.ಹೆಚ್-1-01828-2015-2016 ದಿನಾಂಕ:17.08.2015 ರಂದು ಮೊತ್ತ ರೂ:29,000/-ಕ್ಕೆ ಖರೀದಿಸಿರುವುದು ಕಂಡುಬಂದಿರುತ್ತದೆ. ಕ್ರಯ ಪ್ರಕಾರ ಕ್ರಯದಾರರ ಹೆಸರಿಗೆ ಹಕ್ಕುಬದಲಾವಣೆ ಮಾಡಲು ಈ ಕೆಳಕಂಡಂತೆ ಆದೇಶ;

-:ಆದೇಶ:-

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆಮತ್ತು ಕಾರಣಗಳ ಆಧಾರದ ಮೇಲೆ ಹಾಗೂ ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 128 ಮತ್ತು 129ರನ್ವಯ ಮತ್ತು ಎಂ.ಆರ್.ನಂ.15/2015-16 ರ ಪ್ರಕಾರ, ಬೆಣಕಲ್ಲು ಗ್ರಾಮದ ಸ.ನಂ. 330/ಬಿ ವಿಸ್ತೀರ್ಣ 0-50 ಸೆಂಟ್ಸ್ ಜಮೀನು ಕ್ರಯದಾರರಾದ ಕೆ.ವೀರಮ್ಮ ಗಂಡ ಗೋಣೆಪ್ಪ ಇವರ ಹೆಸರಿಗೆ ಕ್ರಯ ಪ್ರಕಾರ ಹಕ್ಕುಬದಲಾವಣೆ ಮಾಡಲು ಆದೇಶಿಸಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:19.05.2016 ರಂದು ತೆರದ ನ್ಯಾಯಾಲಯದಲ್ಲಿ ಘೋಷಿಸಿದೆ.

19/5/16

[ವಿ.ಹೆಚ್.ಮಲ್ಲಿಕಾರ್ಜುನ]
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ
ಕೋಗಳಿ.

ಪ್ರತಿಯನ್ನು:-

1. ಅರ್ಜಿದಾರರು ಮತ್ತು ತಕರಾರುದಾರರಿಗೆ.
2. ಭೂಮಿಕೇಂದ್ರ, ತಾಲೂಕು ಕಛೇರಿ, ಹಗರಿಬೊಮ್ಮನಹಳ್ಳಿ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಕಂದಾಯ ನಿರೀಕ್ಷಕರು, ಕೋಗಳಿ.
4. ಶುದ್ಧಪ್ರತಿ ಕಡತಕ್ಕೆ.